ಶನಿವಾರ (13ನೆಯ ಏಪ್ರಿಲ್ ) ಕನ್ನಡ ಸಾಹಿತ್ಯ ಪರಿಷತ್ತಿನ

ಮೂರು ದತ್ತಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತಿನ ಮೂರು ಪ್ರಮುಖ ದತ್ತಿಗಳಾದ ಸತ್ಯವತಿ ವಿಜಯರಾಘವ ಚಾರಿಟಬಲ್ ಟ್ರಸ್ಟ್ ಧರ್ಮದರ್ಶಿಗಳ ದತ್ತಿ, ನಾಗಡಿಕೆರೆ-ಕಿಟ್ಟಪ್ಪಗೌಡ ರುಕ್ಮಿಣಿ ತೀರ್ಥಹಳ್ಳಿ ದತ್ತಿ ಮತ್ತು ಪಂಕಜಶ್ರೀ ದತ್ತಿ ಪುರಸ್ಕಾರಗಳ ಪ್ರದಾನ ಕಾರ್ಯಕ್ರಮವು ಶನಿವಾರ ಏಪ್ರಿಲ್ 13ರ ಸಂಜೆ 5.00 ಗಂಟೆಗೆ ಸರಿಯಾಗಿ ಶ್ರೀಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ನಡೆಯಲಿದೆ.

ದತ್ತಿ ಪ್ರಶಸ್ತಿಗಳ ಪ್ರದಾನ ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಾಡೋಜ.ಡಾ.ಮಹೇಶ ಜೋಶಿಯವರು ವಹಿಸಲಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿಗಳಾದ ನ್ಯಾಯಮೂರ್ತಿ ಡಾ.ಎಚ್.ಬಿ.ಪ್ರಭಾಕರ ಶಾಸ್ತ್ರಿಯವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ದತ್ತಿದಾನಿಗಳ ಪರವಾಗಿ ಡಾ.ಎ.ಪುಷ್ಪ ಅಯ್ಯಂಗಾರ್ ಮತ್ತು ಎನ್.ಕೆ.ರಮೇಶ್ ಭಾಗವಹಿಸಲಿದ್ದಾರೆ.

ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ ಜೊತೆಗೆ ಕನ್ನಡ-ಕನ್ನಡಿಗ-ಕರ್ನಾಟಕ ಇವುಗಳ ರಕ್ಷಣೆ ಮತ್ತು ಅಭಿವೃದ್ಧಿ ಸಲುವಾಗಿ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಮೇಲಿನ ಅಪಾರ ಗೌರವದಿಂದ ಮೈಸೂರಿನ ಡಾ.ಎ.ಪುಷ್ಪ ಅಯ್ಯಂಗಾರ್ ಅವರು 'ಸತ್ಯವತಿ ವಿಜಯರಾಘವ ಚಾರಿಟಬಲ್ ಟ್ರಸ್ಟ್' ಧರ್ಮದರ್ಶಿಗಳ ಹೆಸರಿನಲ್ಲಿ ದತ್ತಿ ಇರಿಸಿದ್ದಾರೆ. 2023ನೆಯ ಸಾಲಿನಲ್ಲಿ ಈ ಪ್ರಶಸ್ತಿಗಳನ್ನು ಕನ್ನಡ ಮತ್ತು ಕೊಡವ ಭಾಷೆಗಳಲ್ಲಿ ಸಾಕಷ್ಟು ಕೆಲಸ ಮಾಡಿರುವ ಕೊಡಗಿನ ಹಂಚೆಟ್ಟೀರ ಫ್ಯಾನ್ಸಿ ಮುತ್ತಣ್ಣ ಮತ್ತು ಕಥೆ, ನಾಟಕ, ಕಾದಂಬರಿ, ವಿಮರ್ಶೆ ಹೀಗೆ ಎಲ್ಲಾ ಪ್ರಕಾರಗಳಲ್ಲಿಯೂ ಬರವಣಿಗೆ ಮಾಡಿರುವ ಕೋಲಾರದ ಡಾ.ಅಮರೇಂದ್ರ ಹೊಲ್ಲಂಬಳ್ಳಿಯವರಿಗೆ ನೀಡಲಾಗುತ್ತಿದೆ.

ಬಹುಮುಖ ವ್ಯಕ್ತಿತ್ವದ ಕನ್ನಡದ ಪ್ರಮುಖ ಕಾದಂಬರಿಗಾರ್ತಿ ದಿ.ಎ.ಪಂಕಜ ಅವರು ಎಲೆ ಮರೆಯ ಕಾಯಿಯಂತೆ ಸೇವೆಯನ್ನು ಸಲ್ಲಿಸುತ್ತಿರುವ ಮಹಿಳಾ ಸಾಹಿತಿಗಳನ್ನು ಗುರುತಿಸಿ ಪುರಸ್ಕರಿಸುವ ಸಲುವಾಗಿ ದತ್ತಿ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಸ್ಥಾಪಿಸಿದ್ದಾರೆ 2023ನೆಯ ಸಾಲಿಗೆ ಈ ಪುರಸ್ಕಾರಕ್ಕೆ 2023ನೆಯ ಸಾಲಿಗೆ ದಾವಣಗೆರೆಯ ಕೆ.ಜಿ.ಸರೋಜಾ ನಾಗರಾಜ್ ಮತ್ತು 2024ನೆಯ ಸಾಲಿಗೆ ಬೆಂಗಳೂರಿನ ಡಾ.ಕೆ.ವಿ.ರಾಜೇಶ್ವರಿಯವರು ಆಯ್ಕೆಯಾಗಿದ್ದಾರೆ.

ಸ್ವಾತಂತ್ರ್ಯ ಹೋರಾಟ ಮತ್ತು ಕನ್ನಡ ಚಳುವಳಿಗಳಲ್ಲಿ ಸಕ್ರಿಯರಾಗಿದ್ದ ತೀರ್ಥಹಳ್ಳಿಯ ಕಿಟ್ಟಪ್ಪ ಗೌಡರು ಪ್ರಾಮಾಣಿಕ ಪತ್ರಕರ್ತರಿಗೆ ನೀಡುವ ಸಲುವಾಗಿ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ 'ನಾಗಡಿಕೆರೆ-ಕಿಟ್ಟಪ್ಪ ಗೌಡ ರುಕ್ಮಿಣಿ ತೀರ್ಥ ಹಳ್ಳಿ' ದತ್ತಿ ಪ್ರಶಸ್ತಿಯನ್ನು ಸ್ಥಾಪಿಸಿದ್ದು 2024ನೆಯ ಸಾಲಿಗೆ 'ಉದಯ ಕಾಲ' ಪತ್ರಿಕೆಯ ಸಂಪಾದಕ ಮತ್ತು ಪ್ರಕಾಶಕರಾಗಿರುವ ಕೆ.ಎನ್.ಪುಟ್ಟಲಿಂಗಯ್ಯ ಗೌಡ ಅವರಿಗೆ ಈ ಪುರಸ್ಕಾರವನ್ನು ನೀಡಲಾಗುತ್ತಿದೆ.

ಸಾಂಸ್ಕೃತಿಕವಾಗಿ ಬಹಳ ಮುಖ್ಯವಾದ ಈ ಕಾರ್ಯಕ್ರಮದ ವಿವರಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ನಿಮ್ಮ ಪತ್ರಿಕೆಯಲ್ಲಿ ಪ್ರಕಟಿಸುವುದರ ಜೊತೆಗೆ ಕಾರ್ಯಕ್ರಮಕ್ಕೆ ನಿಮ್ಮ ವರದಿಗಾರರು ಮತ್ತು ಛಾಯಾಗ್ರಾಹಕರನ್ನು ಕಳುಹಿಸ ಬೇಕಾಗಿ ವಿನಂತಿ.

ಎನ್.ಎಸ್.ಶ್ರೀಧರ ಮೂರ್ತಿ

ಸಂಚಾಲಕರು, ಪ್ರಕಟಣಾ ವಿಭಾಗ, ಕನ್ನಡ ಸಾಹಿತ್ಯ ಪರಿಷತ್ತು